**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿಇ/ಆಡಳಿತ-ಎ/ಉ.ವೇಳಾ.ಪ:01/2018-19

ನಿರ್ದೇಶಕರ ಕಚೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡ ರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560 012
ದಿನಾಂಕ:16/04/2018

## ಜ್ಞಾಪನ

ವಿಷಯ: 2018-19ನೇ ಶೈಕ್ಷಣಿಕ ಸಾಲಿನ ವೇಳಾ ಪಟ್ಟಿಯಂತೆ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ.

ಉಲ್ಲೇಖ: ಈ ಕಚೇರಿ ಸುತ್ತೋಲೆ ಸಂಖ್ಯೆ:ಪಪೂಶಿ/ಶೈಶಾ.04/ದಾ.ವೇ.ಶೈ.ಚ/2017-18 ದಿನಾಂಕ: 11/04/2018

*****

ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ 2018-19ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ದಾಖಲಾತಿ ಮತ್ತು ವೇಳಾ ಪಟ್ಟಿಯನ್ನು ಲಗತ್ತಿಸಿ ಅದರಂತೆ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸಲು ಈಗಾಗಲೇ ಉಲ್ಲೇಖ-01 ರಲ್ಲಿ ಸೂಚಿಸಲಾಗಿದೆ.

ದಿನಾಂಕ: 02/05/2018 ರಿಂದ ದ್ವಿತೀಯ ಪಿ.ಯು.ಸಿ ತರಗತಿಗಳಿಗೆ ಮೊದಲನೇ ಅವಧಿ ಪ್ರಾರಂಭವಾಗುವುದರಿಂದ ಆ ದಿನದಂದು ಸರ್ಕಾರಿ/ಅನುದಾನಿತ ಕಾಲೇಜಿನ ಉಪನ್ಯಾಸಕರುಗಳು ಕಡ್ಡಾಯವಾಗಿ ಹಾಜರಾಗಿ ಕರ್ತವ್ಯವನ್ನು ನಿರ್ವಹಿಸಲು ಕಟ್ಟುನಿಟ್ಟಿನ ಆದೇಶವನ್ನು ನೀಡಿದೆ. ಆದೇಶವನ್ನು ಪಾಲಿಸದೇ ಉಲ್ಲಂಘಿಸಿದ್ದಲ್ಲಿ ಸಂಬಂಧಿಸಿದ ಪ್ರಾಚಾರ್ಯರು ಮತ್ತು ಉಪನ್ಯಾಸಕರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮ 106 (ಎ) ರಂತೆ ಕ್ರಮ ಜರುಗಿಸಲಾಗುವುದು.

16/4/18
ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ – ಮುಂದಿನ ಸೂಕ್ತ ಕ್ರಮಕ್ಕಾಗಿ, ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಸೂಚಿಸಿದೆ.